ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1442 (1688)
ಸದಸ್ಯರ ಹೆಸರು	:	ಶ್ರೀ. ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	14.03.2022
ಉತ್ತರಿಸಬೇಕಾದ ಸಚಿವರು	:	ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು.

ಕ್ರಮ ಸಂಖ್ಯೆ:	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕಡ್ಡಾಯವಾಗಿ ಅನುಮೋದನೆ ಪಡೆದ ನಂತರವೇ ಜೈವಿಕ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಘಟಕಗಳನ್ನು ಸ್ಥಾಪಿಸಿ ಕಾರ್ಯಾಚರಣೆ ಮಾಡಬೇಕೆನ್ನುವ ನಿಯಮ ಜಾರಿಯಲ್ಲಿದೆಯೇ;	ಹೌದು.
ಆ)	ಹಾಗಿದ್ದಲ್ಲಿ, ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಒಟ್ಟು ಎಷ್ಟು ಜೈವಿಕ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಘಟಕಗಳ ಸ್ಥಾಪನೆ ಮತ್ತು ಕಾರ್ಯಾಚರಣೆಗೆ ಅನುಮತಿ ನೀಡಲಾಗಿದೆ;	ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಒಟ್ಟು 26 ಜೈವಿಕ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಘಟಕಗಳ ಸ್ಥಾಪನೆ ಮತ್ತು ಕಾರ್ಯಾಚರಣೆಗೆ ಅನುಮತಿ ನೀಡಲಾಗಿದ್ದು, ಪ್ರಸ್ತುತ 25 ವಿಲೇವಾರಿ ಘಟಕಗಳು ಚಾಲ್ತಿಯಲ್ಲಿರುತ್ತವೆ.
ಇ)	ರಾಜ್ಯದ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಇರುವ ಎಲ್ಲಾ ಆಸ್ಪತ್ರೆಗಳು ಮತ್ತು ಶುಶ್ರೂಷ ಕೇಂದ್ರಗಳಿಂದ ಪ್ರತಿ ದಿನಕ್ಕೆ ಸರಾಸರಿ ಒಟ್ಟು ಎಷ್ಟು ಪ್ರಮಾಣದ ಜೈವಿಕ ತ್ಯಾಜ್ಯ ಉತ್ಪಾದನೆಯಾಗುತ್ತದೆ ಎಂಬ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆಯೇ, ಸಂಗ್ರಹಿಸಿದ್ದಲ್ಲಿ, ದಿನಂಪ್ರತಿ ರಾಜ್ಯದಲ್ಲಿ ಉತ್ಪಾದನೆಯಾಗುವ ಸರಾಸರಿ ಜೈವಿಕ ತ್ಯಾಜ್ಯದ ಪ್ರಮಾಣ ಎಷ್ಟು?	ಹೌದು, ದಿನಂಪ್ರತಿ ರಾಜ್ಯದಲ್ಲಿ 82,604 ಕೆ.ಜಿ ಜೈವಿಕ ತ್ಯಾಜ್ಯ ಉತ್ಪಾದನೆಯಾಗುತ್ತಿರುತ್ತದೆ.
ಈ)	ರಾಜ್ಯದಲ್ಲಿ ದಿನಂಪ್ರತಿ ಉತ್ಪಾದನೆಯಾಗುವ ಜೈವಿಕ ತ್ಯಾಜ್ಯವನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಇರುವ ಕಾಲಮಿತಿಯಲ್ಲಿ ವಿಲೇವಾರಿ ಮಾಡುವಷ್ಟು ಸಾಮರ್ಥ್ಯ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜೈವಿಕ ತ್ಯಾಜ್ಯ ವಿಲೇವಾರಿ ಘಟಕಗಳಿಗೆ ಇದೆಯೆ;	ರಾಜ್ಯದಲ್ಲಿ ಚಾಲ್ತಿಯಲ್ಲಿರುವ 25 ಜೈವಿಕ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಘಟಕಗಳ ಒಟ್ಟು ಸಾಮರ್ಥ್ಯ ದಿನಂಪ್ರತಿ 90,480 ಆಗಿದ್ದು, ಜೈವಿಕ ತ್ಯಾಜ್ಯವನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಇರುವ ಕಾಲಮಿತಿಯಲ್ಲಿ ವಿಲೇವಾರಿ ಮಾಡುವಷ್ಟು ಸಾಮರ್ಥ್ಯವಿರುತ್ತದೆ.

ಉ)	ಇದ್ದಲ್ಲಿ, ರಾಜ್ಯದಲ್ಲಿ ಉತ್ಪಾದನೆಯಾಗುವ ಜೈವಿಕ ತ್ಯಾಜ್ಯವು ವೈಜ್ಞಾನಿಕ ರೀತಿಯ ವಿಲೇವಾರಿ ಘಟಕಗಳ ಲಭ್ಯತೆ ಕೊರತೆಯಿಂದಾಗಿ ಅವೈಜ್ಞಾನಿಕ ರೀತಿಯಲ್ಲಿ ಬೇಕಾಬಿಟ್ಟಿಯಾಗಿ ಖಾಲಿ ಜಾಗಗಳಲ್ಲಿ ವಿಲೇವಾರಿ ಮಾಡುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೆಲವೊಮ್ಮೆ ಅವೈಜ್ಞಾನಿಕವಾಗಿ ಜೈವಿಕ ತ್ಯಾಜ್ಯವನ್ನು ವಿಲೇವಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಊ)	ಬಂದಿದ್ದಲ್ಲಿ, ಈ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು?	ಈ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕಾನೂನು ರೀತ್ಯಾ ಸಂಬಂಧಿಸಿದ ಸಂಸ್ಥೆಗೆ ನೋಟೀಸ್ ಜಾರಿಮಾಡಿ, ಮೌಖಿಕ ವಿಚಾರಣೆ ನಡೆಸಿ ತಪ್ಪಿತಸ್ಥರೆಂದು ಸಾಬೀತಾದಲ್ಲಿ ಅಂತಹ ಸಂಸ್ಥೆಯ / ವ್ಯಕ್ತಿಯ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಅಥವಾ ಸಂಬಂಧಿಸಿದ ಪೋಲಿಸ್ ಠಾಣೆಯಲ್ಲಿ ದೂರು ದಾಖಲಿಸಲಾಗುವುದು.

ಸಂಖ್ಯೆ: ಅಪಜೀ 53 ಇಎನ್‌ಜಿ 2022

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ ಪರಿಸರ
ಮತ್ತು ಜೀವಿಪರಿಸ್ಥಿತಿ ಸಚಿವರು.